# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1078 (1049) |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.03.2025. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಳಂದ ಪಟ್ಟಣದಲ್ಲಿರುವ ಎಲ್ಲಾ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಇಲ್ಲದಿರುವುದರಿಂದ ವಿದ್ಯಾಭ್ಯಾಸದ ಗುಣಮಟ್ಟ ಕುಸಿದು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು ಬಂದಿದೆ |
| ಆ) | ಬಂದಿದ್ದಲ್ಲಿ ಯಾವಾಗ ಪ್ರಾಧ್ಯಾಪಕರನ್ನು ನೇಮಕ ಮಾಡಲಾಗುವುದು; ಹಾಗೂ ಅಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿ ಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು: | ಸರ್ಕಾರದ ಆದೇಶ ಸಂಖ್ಯೆ ಇಪಿ 230 ಪಿಬಿಎಸ್ 2024 ದಿನಾಂಕ:07-10-2024 ರಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಒಟ್ಟು 5267 ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.<br>ಆಳಂದ ಪಟ್ಟಣದಲ್ಲಿ ಒಟ್ಟು 19 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಅವುಗಳಲ್ಲಿ 10 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಸದರಿ ಖಾಲಿ ಹುದ್ದೆಗಳನ್ನು ಅತಿಥಿ ಶಿಕ್ಷಕರ ನೇಮಕಾತಿ ಮಾಡುವ ಮೂಲಕ ಸದರಿ ಶಾಲೆಗಳಲ್ಲಿ ಬೋಧನಾ ವ್ಯವಸ್ಥೆ ಮಾಡಲಾಗಿದೆ.<br>ಆಳಂದ ಪಟ್ಟಣದಲ್ಲಿ ಒಟ್ಟು 03 ಸರ್ಕಾರಿ ಪ್ರೌಢ ಶಾಲೆಗಳಿದ್ದು, ಅವುಗಳಲ್ಲಿ 10 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಸದರಿ ಖಾಲಿ ಹುದ್ದೆಗಳನ್ನು ಅತಿಥಿ ಶಿಕ್ಷಕರ ನೇಮಕಾತಿ ಮಾಡುವ ಮೂಲಕ ಸದರಿ ಶಾಲೆಗಳಲ್ಲಿ ಬೋಧನಾ ವ್ಯವಸ್ಥೆ ಮಾಡಲಾಗಿದೆ.<br>ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಒಟ್ಟು 768 ಹುದ್ದೆಗಳ ಪೈಕಿ 36 ಹುದ್ದೆಗಳ ಭರ್ತಿಗೆ ಸರ್ಕಾರದ ಅನುಮತಿ ನೀಡಲಾಗಿರುತ್ತದೆ.<br>ಆಳಂದ ಪಟ್ಟಣದಲ್ಲಿರುವ ಎರಡು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 09 ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳಿಗೆ ಎದುರಾಗಿ ನಿಯೋಜನೆ/ಅತಿಥಿ ಉಪನ್ಯಾಸಕರ ನೇಮಕ ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಗುಣಮಟ್ಟವನ್ನು ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| ಇ) | ಸದರಿ ಶಾಲೆ ಹಾಗೂ ಕಾಲೇಜುಗಳ ಕೊಠಡಿಗಳು ಶಿಥಿಲಗೊಂಡಿರುವುದು ಹಾಗೂ ಗೋಡೆಗಳಿಗೆ ಸುಣ್ಣ ಬಣ್ಣ ಮಾಡದೇ ಇರುವುದು ಮತ್ತು ವಿದ್ಯಾರ್ಥಿಗಳಿಗೆ ಕುಳಿತುಕೊಳ್ಳಲು ಪೀಠೋಪಕರಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮೂಲ ಸೌಕರ್ಯಗಳನ್ನು ಯಾವಾಗ ಕಲ್ಪಿಸಲಾಗುವುದು; (ಮಾಹಿತಿಯನ್ನು ನೀಡುವುದು) | ಆಳಂದ ಪಟ್ಟಣದಲ್ಲಿ ಎಲ್ಲಾ ಸರ್ಕಾರಿ ಶಾಲೆಗಳಿಗೆ ಸುಣ್ಣ ಬಣ್ಣ ಆಗಿರುತ್ತದೆ. |

ಕೆ.ಕೆ.ಆರ್.ಡಿ.ಬಿ ವತಿಯಿಂದ ಈ ಕೆಳಕಂಡ ಶಾಲೆಗಳಲ್ಲಿ ನಡೆದ ಕಾಮಗಾರಿಗಳ ವಿವರ ಈ ಕೆಳಗಿನಂತಿದೆ.

2022–23ನೇ ಸಾಲಿನಲ್ಲಿ

1. ಸರ್ಕಾರಿ ಹಿಪ್ರಾಶಾಲೆ, ಬಾಳನಕೇರಿ, ಆಳಂದ ದಲ್ಲಿ ಹಳೆಯ ಕಟ್ಟಡ ನೆಲಸಮಗೊಳಿಸಿ ಹೊಸ 4 ಕೊಠಡಿಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ರೂಫ್ ಲೆವೆಲ್ ಹಂತದಲ್ಲಿ ಇರುತ್ತವೆ.
2. ಸರ್ಕಾರಿ ಹಿ.ಪ್ರಾ.ಶಾಲೆ, ನೇಕಾರ ಕಾಲೋನಿ, ಆಳಂದ ದಲ್ಲಿ 3 ಹೊಸ ಕೊಠಡಿಗಳನ್ನು ನಿರ್ಮಾಣಗೊಳಿಸಲಾಗಿದ್ದು, ಸದರಿ ಕೊಠಡಿಗಳಲ್ಲಿ ತರಗತಿಗಳು ನಡೆಯುತ್ತಿದೆ.
3. ಸರ್ಕಾರಿ ಕಿ.ಪ್ರಾ.ಶಾಲೆ, ಸುಲ್ತಾನಪುರ ಗಲ್ಲಿ, ಆಳಂದದಲ್ಲಿ 1 ಹೊಸ ಕೊಠಡಿ ನಿರ್ಮಾಣಗೊಳಿಸಲಾಗಿದ್ದು, ಸದರಿ ಕೊಠಡಿಯಲ್ಲಿ ತರಗತಿ ನಡೆಯುತ್ತಿದೆ.

2024–25ನೇ ಸಾಲಿನಲ್ಲಿ

1. ಸರ್ಕಾರಿ ಮಾದರಿ ಶಾಲೆ (ಸಿ.ಪಿ.ಎಸ್) ಶಾಲೆಯ ಹಳೆಯ ಕಟ್ಟಡ ತೆರವುಗೊಳಿಸಿ ಹೊಸ ಕಟ್ಟಡ ನಿರ್ಮಾಣ ಪ್ರಾರಂಭಗೊಂಡಿದೆ.
2. ಸ.ಕಿ.ಪ್ರಾ.ಶಾಲೆ, ಹಳೆ ಅನ್ಸಾರಿ ಮೊಹೆಲ್ಲಾ, ಆಳಂದ ಶಾಲೆಗೆ 02 ಕೊಠಡಿ ನಿರ್ಮಾಣ ಅನುಮೋದನೆಗೊಂಡಿದ್ದು ಕಾಮಗಾರಿ ಪ್ರಾರಂಭವಾಗಬೇಕಿದೆ.

2022–23ನೇ ಸಾಲಿನಲ್ಲಿ ರಾಜ್ಯ ಯೋಜನೆ ಅಡಿಯಲ್ಲಿ ಈ ಕೆಳಕಂಡ ಶಾಲೆಗಳಿಗೆ ಡೆಸ್ಕ್‌ಗಳನ್ನು ಸರಬರಾಜು ಮಾಡಲಾಗಿದೆ.

- ಸರ್ಕಾರಿ ಕನ್ಯಾ ಪ್ರೌಢ ಶಾಲೆ ಆಳಂದ ಗೆ 34 ಡೆಸ್ಕ್
- ಆದರ್ಶ ವಿದ್ಯಾಲಯ ಆಳಂದ ಗೆ 19 ಡೆಸ್ಕ್
- ಬಾಲಕರ ಪ್ರೌಢ ಶಾಲೆ ಆಳಂದ ಗೆ 23 ಡೆಸ್ಕ್

ಆಳಂದ ತಾಲ್ಲೂಕಿನಲ್ಲಿರುವ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿ ಕಾಮಗಾರಿಗೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಅನುದಾನ ಮಂಜೂರು ಮಾಡಲಾಗಿದೆ.

ಶಾಲಾ ಕೊಠಡಿಗಳ ದುರಸ್ತಿ:

(ರೂ.ಲಕ್ಷಗಳಲ್ಲಿ)

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ | ಬಿಡುಗಡೆಯಾದ ಅನುದಾನ |
|---|---|---|---|---|
| 2023–24 | 59 | 95 | 101.10 | 101.10 |
| 2024–25 | 15 | 61 | 45.46 | 40.46 |
| ಒಟ್ಟು | 74 | 156 | 146.56 | 141.56 |

<table>
<tr><td></td><td></td><td>ಆಳಂದ ಪಟ್ಟಣದಲ್ಲಿ ಎರಡು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>1. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಒಟ್ಟು 06 ತರಗತಿ ಕೊಠಡಿಗಳ ದುರಸ್ಥಿ ಅಗತ್ಯತೆ ಇದ್ದು, ಇಲಾಖೆಗೆ ಒದಗಿಸಲಾದ ಅನುದಾನದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ದುರಸ್ಥಿ ಕಾರ್ಯವನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತದೆ. ಪ್ರತಿ ವರ್ಷವೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಾಲೇಜಿನ ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.<br>2. ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ರೂ. 10.00 ಲಕ್ಷ ಮೊತ್ತದ ದುರಸ್ಥಿ ಕಾಮಗಾರಿ ಮಂಜೂರಾಗಿರುತ್ತದೆ. ಪೀಠೋಪಕರಣ ಹಾಗೂ ಸುಣ್ಣ ಬಣ್ಣದ ಅವಶ್ಯಕತೆ ಇರುವುದಿಲ್ಲ.</td></tr>
<tr><td>ಈ)</td><td>ಸದರಿ ಶಾಲೆ ಹಾಗೂ ಕಾಲೇಜುಗಳ ಹೊರಾಂಗಣದ ಸುತ್ತಮುತ್ತಲಿನ ರಸ್ತೆಗಳು ಹಾಳಾಗಿರುವುದು ಹಾಗೂ ವಿದ್ಯಾರ್ಥಿ/ವಿದ್ಯಾರ್ಥಿನಿಯವರಿಗೆ ಶುದ್ಧ ಕುಡಿಯುವ ನೀರು ಮತ್ತು ಶೌಚಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಾರ್ಯಕೈಗೊಳ್ಳಲು ಸರ್ಕಾರ ಕ್ರಮವೇನು?</td><td>ಆಳಂದ ಪಟ್ಟಣದಲ್ಲಿ ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಶುದ್ಧ ಕುಡಿಯುವ ನೀರು ಮತ್ತು ಶೌಚಾಲಯದ ಯಾವುದೇ ಕೊರತೆ ಇರುವುದಿಲ್ಲ.<br><br>ಆಳಂದ ತಾಲ್ಲೂಕಿಗೆ ಸಂಬಂಧಿಸಿದಂತೆ, ನರೇಗಾ ಸಹಯೋಗದೊಂದಿಗೆ ರಾಜ್ಯವಲಯದಡಿ ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಮಂಜೂರಾಗಿರುತ್ತದೆ: (ರೂ.ಲಕ್ಷಗಳಲ್ಲಿ)<br>
<table>
<tr><td>ವರ್ಷ</td><td>ಶಾಲೆಗಳ ಸಂಖ್ಯೆ</td><td>ಶೌಚಾಲಯಗಳ ಸಂಖ್ಯೆ</td><td>ಮಂಜೂರಾದ ಅನುದಾನ</td><td>ಬಿಡುಗಡೆಯಾದ ಅನುದಾನ</td></tr>
<tr><td>2022–23 ರಿಂದ 2024–25</td><td>58</td><td>58</td><td>120.64</td><td>102.54</td></tr>
</table>
ಆಳಂದ ತಾಲ್ಲೂಕಿಗೆ ಸಂಬಂಧಿಸಿದಂತೆ, ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅನುದಾನ ಬಿಡುಗಡೆಯಾಗಿರುತ್ತದೆ.<br>
<table>
<tr><td>ವರ್ಷ</td><td>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</td></tr>
<tr><td>2022–23</td><td>23.25</td></tr>
<tr><td>2023–24</td><td>29.54</td></tr>
<tr><td>2024–25</td><td>42.37</td></tr>
<tr><td>ಒಟ್ಟು</td><td>95.16</td></tr>
</table>
</td></tr>
</table>

| | | |
|---|---|---|
| | | ಕಾಲೇಜುಗಳಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆ ಇರುತ್ತದೆ. ನರೇಗಾ ಯೋಜನೆಯಡಿಯಲ್ಲಿ ಈಗಾಗಲೇ ಹೆಚ್ಚುವರಿಯಾಗಿ ಶೌಚಾಲಯಗಳು ಮಂಜೂರು ಆಗಿರುತ್ತವೆ. |

ಸಂಖ್ಯೆ: ಇಪಿ 119 ಪಿಎಂಸಿ 2025

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು